# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಚಾಲೆಂಜ್ ಫಂಡ್ ಯೋಜನೆಯಡಿ ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರಿಗೆ ರಾಜ್ಯದ ಪಾಲಿಟೆಕ್ನಿಕ್ ಕಾಲೇಜುಗಳ ಕ್ರಿಯಾ ಯೋಜನೆಯನ್ನು ಕಾರ್ಯರೂಪಕ್ಕೆ ತರಲು ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:
1) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 92 ಇಆಸು 2009, ದಿನಾಂಕ:08.07.2010.
2) ಉನ್ನತ ಶಿಕ್ಷಣ ಇಲಾಖೆಯ ಕಡತ ಸಂಖ್ಯೆ: ಇಡಿ 36 ಹೆಚ್‌ಪಿಯು 18.
3) ದಿನಾಂಕ:22.03.2018 ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಚಾಲೆಂಜ್ ಫಂಡ್ ಯೋಜನೆಯ ಬಗ್ಗೆ ನಡೆದ ಸಭಾ ನಡವಳಿಗಳು.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ದಿನಾಂಕ: 08.07.2010ರ ಸರ್ಕಾರದ ಆದೇಶದಲ್ಲಿ ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ ಚಾಲೆಂಜ್ ಫಂಡ್ ಯೋಜನೆಯನ್ನು ಸ್ಥಾಪಿಸಲಾಗಿದೆ. ಈ ಯೋಜನೆಯಲ್ಲಿ ಗುಣಮಟ್ಟದ ಗುರಿಗಳನ್ನು ಸಾಧಿಸಲು ಪ್ರಯೋಗಾತ್ಮಕ ಯೋಜನೆಗಳನ್ನು ಅನುಷ್ಠಾನಗೊಳಿಸುವ ಸಲುವಾಗಿ ಅನುದಾನವನ್ನು ಬಿಡುಗಡೆ ಮಾಡಲು ಉದ್ದೇಶಿಸಲಾಗಿದೆ. ಈ ಯೋಜನೆಗೆ ಸರ್ಕಾರವು 2017-18ನೇ ಸಾಲಿನಲ್ಲಿ ರೂ.600.00 ಲಕ್ಷಗಳನ್ನು ಮೀಸಲಿರಿಸಿದೆ.

ಓದಲಾದ (2)ರ ದಿನಾಂಕ: 08.11.2017 ರ ಪ್ರಸ್ತಾವನೆಯಲ್ಲಿ ಉನ್ನತ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿಯವರು, ರಾಜ್ಯದ ವಿವಿಧ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಿಂದ ಅಂದಾಜು ವೆಚ್ಚದ ಸಮೇತ ಸಲ್ಲಿಕೆಯಾಗಿರುವ ಕ್ರಿಯಾ ಯೋಜನೆಗಳನ್ನು ಕಾರ್ಯರೂಪಕ್ಕೆ ತರಲು ಚಾಲೆಂಜ್ ಫಂಡ್ ಯೋಜನೆಯಡಿ ರೂ. **403.62** ಲಕ್ಷಗಳ ಅನುದಾನವನ್ನು ಅನುದಾನ ಕೋರಿ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪ್ರಸ್ತಾವನೆಯನ್ನು ಅನುಮೋದಿಸಿ ಸಲ್ಲಿಸಿರುತ್ತಾರೆ.

ಓದಲಾದ (3)ರಲ್ಲಿ, ಚಾಲೆಂಜ್ ಫಂಡ್ ಯೋಜನೆ ಜಾರಿಗೆ ಸಂಬಂಧಪಟ್ಟಂತೆ ಅನುದಾನ ಬಿಡುಗಡೆ ಮಾಡಲು ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: 22.03.2018ರಂದು ನಡೆದ ಸಭೆಯಲ್ಲಿ, ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪ್ರಸ್ತಾವನೆಯನ್ನು ಸರ್ಕಾರದ ಮುಖ್ಯ ಕಾರ್ಯದರ್ಶಿಯವರು ಹಾಗೂ ಸಮಿತಿಯ ಸದಸ್ಯರು ಪರಿಶೀಲಿಸಿ, ಯೋಜನೆ ಕುರಿತಾದ ಹೆಚ್ಚುವರಿ ಮಾಹಿತಿ ಪಡೆದಿದ್ದು ಯೋಜನೆಯು ಉತ್ತಮವಾದುದೆಂದು ಪರಿಗಣಿಸಿ ಬೆಂಗಳೂರು, ರಾಯಚೂರು ಮತ್ತು ಬಾಗಲಕೋಟೆ ಜಿಲ್ಲೆಗಳ ಪಾಲಿಟೆಕ್ನಿಕ್ ಕಾಲೇಜುಗಳ ಕ್ರಿಯಾಯೋಜನೆಯನ್ನು ಕಾರ್ಯರೂಪಕ್ಕೆ ತರಲು ಒಟ್ಟು ರೂ.**80.00** ಲಕ್ಷಗಳ ಅನುದಾನವನ್ನು

ಮಂಜೂರು ಮಾಡಲು ಅನುಮೋದನೆ ನೀಡಲಾಯಿತು. ಅದರಂತೆ, ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ: 120 :ಇಆಸು: 2017**

**ಬೆಂಗಳೂರು, ದಿನಾಂಕ: 26.03.2018.**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಸರ್ಕಾರದ ಚಾಲೆಂಜ್ ಫಂಡ್ ಯೋಜನೆಯಡಿ ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ, ನಿರ್ದೇಶಕರು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರ ಪ್ರಸ್ತಾವನೆಯನ್ನು ಪರಿಶೀಲಿಸಿ ಬೆಂಗಳೂರು, ರಾಯಚೂರು ಮತ್ತು ಬಾಗಲಕೋಟೆ ಜಿಲ್ಲೆಗಳ ಪಾಲಿಟೆಕ್ನಿಕ್ ಕಾಲೇಜುಗಳ ಕ್ರಿಯಾಯೋಜನೆಯನ್ನು ಕಾರ್ಯರೂಪಕ್ಕೆ ತರಲು ಒಟ್ಟು ರೂ.80.00 (ಎಂಭತ್ತು ಲಕ್ಷ ರೂಪಾಯಿಗಳು ಮಾತ್ರ) ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲು ಮಂಜೂರಾತಿ ನೀಡಿದೆ.

ಯೋಜನೆ ನಿರ್ವಹಿಸುವ ಅಧಿಕಾರಿಯು ನಿಗದಿತ ಅವಧಿಯಲ್ಲಿ ಯೋಜನೆಯನ್ನು ಸಮರ್ಪಕವಾಗಿ ನಿರ್ವಹಿಸಿ ಅನುದಾನ ಬಳಕೆಯ ಪ್ರಮಾಣ ಪತ್ರವನ್ನು ಸಕಾಲದಲ್ಲಿ ತಪ್ಪದೇ ಒದಗಿಸುವುದು. ತಪ್ಪಿದಲ್ಲಿ, ಬಿಡುಗಡೆಯಾದ ಅನುದಾನವನ್ನು ಸರ್ಕಾರಕ್ಕೆ ಹಿಂದಿರುಗಿಸತಕ್ಕದ್ದು.

ಈ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2052-00-090-0-25-059 (ಯೋಜನೇತರ) ಆಡಳಿತ ಸುಧಾರಣೆ ಸವಾಲು ನಿಧಿ- ಅಡಿಯಲ್ಲಿ ಭರಿಸತಕ್ಕದ್ದು.

ಈ ಯೋಜನೆಯನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ (ಕೆ.ಟಿ.ಪಿ.ಪಿ) ರನ್ವಯ ಕಾರ್ಯ ನಿರ್ವಹಿಸುವಂತೆ ಆದೇಶಿಸಿದೆ. ಯೋಜನೆ ಪೂರೈಸಿದ ನಂತರ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯಿಂದ ಮೌಲ್ಯಮಾಪನ ಮಾಡಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 01 ಟಿಎಫ್‌ಪಿ 2017, ದಿನಾಂಕ: 05.04.2017 ಮತ್ತು ಆಇ 05 ಟಿಎಫ್‌ಪಿ 2017, ದಿನಾಂಕ: 01.01.2018ರಲ್ಲಿ ಆಡಳಿತ ಇಲಾಖಾ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ,

ಸುಜಾತ ಹೆಚ್.ಎಸ್

**(ಸುಜಾತ ಹೆಚ್.ಎಸ್.)**
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ-ತರಬೇತಿ)

**ಪ್ರತಿ:**

1. ಮಹಾಲೇಖಪಾಲರು ಕರ್ನಾಟಕ, (ಆಡಿಟ್ 1 ಮತ್ತು 2) (ಲೆಕ್ಕಪತ್ರ 1 ಮತ್ತು 2), ಬೆಂಗಳೂರು.

2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
5. ನಿರ್ದೇಶಕರು, ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆ, ಶಾಂತಿನಗರ, ಬೆಂಗಳೂರು-560027
5. ಉಪ ನಿರ್ದೇಶಕರು, ಟಿ.ಎಸ್.ಎಂ.ಸಿ., ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಕಾರ್ಯದರ್ಶಿ.
7. ಸರ್ಕಾರದ ಉಪ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಸಹಾಯಕರು.
8. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.